# ಡಾ: ಬಿ. ಆರ್. ಅಂಬೇಡ್ಕರ್ ಅಭಿವೃದ್ಧಿ ನಿಗಮ

(ಕರ್ನಾಟಕ ಸರ್ಕಾರದ ಸಾಮ್ಯಕ್ಕೆ ಒಳಪಟ್ಟಿದೆ)

೯ನೇ ಮಹಡಿ, ವಿಶ್ವೇಶ್ವರಯ್ಯಚಿಕ್ಕಗೋಪುರ, ಡಾ: ಬಿ. ಆರ್. ಅಂಬೇಡ್ಕರ್ ವೀದಿ, ಬೆಂಗಳೂರು – 01

ದೂರವಾಣಿ : 080 – 22865661

Email : mdadcl2011@gmail.com



# 2021-22 ಸಾಲಿನಲ್ಲಿ ನಿಗಮವು ಅನುಷ್ಠಾನಗೊಳಿಸುತ್ತಿರುವ ವಿವಿಧ ಯೋಜನೆಗಳ ವಿವರ

## 1. ಸ್ವಯಂ ಉದ್ಯೋಗ (ನೇರಸಾಲ) ಯೋಜನೆ

ಸ್ವಯಂ ಉದ್ಯೋಗ ಯೋಜನೆಯಡಿ ಪರಿಶಿಷ್ಟ ಜಾತಿ ಯುವಕ ಯುವತಿಯರಿಗೆ ಹಣ್ಣು ಮತ್ತು ತರಕಾರಿಗಳನ್ನು ತಳ್ಳುವಗಾಡಿಯ ಮೂಲಕ ಮಾರಾಟ ಮಾಡಲು ಘಟಕ ವೆಚ್ಚ ರೂ.0.50ಲಕ್ಷಗಳಲ್ಲಿ ಸಾಲ ಸೌಲಭ್ಯ ಕಲ್ಪಿಸಲಾಗುವುದು. ಘಟಕ ವೆಚ್ಚದ ಪೈಕಿ ರೂ25000/- ಸಹಾಯಧನ ಹಾಗೂ ರೂ.25000/- ಸಾಲ ಮೊತ್ತವಾಗಿರುತ್ತದೆ.

## 2. ಉದ್ಯಮಶೀಲತಾ ಯೋಜನೆ (ಐ.ಎಸ್.ಬಿ) (ಬ್ಯಾಂಕುಗಳ ಸಹಯೋಗದಲ್ಲಿ)

ಉದ್ಯಮ ಶೀಲತಾ ಅಭಿವೃದ್ಧಿ ಯೋಜನೆಯಡಿ ನಗರ ಪ್ರದೇಶದಲ್ಲಿ ಹಾಪ್‌ಕಾಮ್ಸ್ ಮಾದರಿಯಲ್ಲಿ ಹಣ್ಣು ಮತ್ತು ತರಕಾರಿ ಮಾರಾಟ ಮಾಡಲು ಮಳಿಗೆಗಳನ್ನು ಸ್ಥಾಪಿಸಲು ಮತ್ತು ಇತರೆ ಸ್ವಯಂ ಉದ್ಯೋಗ ಘಟಕಗಳ ಉದ್ದೇಶಕ್ಕೆ ಘಟಕ ವೆಚ್ಚದ ಶೇ.70ರಷ್ಟು ಅಥವಾ ಗರಿಷ್ಠ ಮಿತಿ ರೂ.1.00ಲಕ್ಷದವರೆಗೆ ಸಹಾಯಧನ ಉಳಿದ ಮೊತ್ತ ಬ್ಯಾಂಕ್ ಸಾಲ.

## 3. ಗಂಗಾ ಕಲ್ಯಾಣ ಯೋಜನೆ-ವೈಯಕ್ತಿಕ ನೀರಾವರಿ ಕೊಳವೆಬಾವಿ

ಗಂಗಾ ಕಲ್ಯಾಣ ವೈಯಕ್ತಿಕ ನೀರಾವರಿ ಕೊಳವೆಬಾವಿ ಯೋಜನೆಯನ್ನು 1984ರಿಂದ ಅನುಷ್ಟಾನಗೊಳಿಸಲಾಗುತ್ತಿದೆ. ಈ ಯೋಜನೆಯಡಿ 1.1/2 ಎಕರೆಯಿಂದ 5.00 ಎಕರೆ ಜಮೀನು ಹೊಂದಿರುವ ಪರಿಶಿಷ್ಟ ಜಾತಿಯ ಸಣ್ಣ ಮತ್ತು ಅತಿ ಸಣ್ಣ ರೈತರ ಜಮೀನಿನಲ್ಲಿ ಕೊಳವೆಬಾವಿ ಕೊರೆಸಿ, ಪಂಪ್‌ಸೆಟ್ ಅಳವಡಿಸಿ ವಿದ್ಯುದ್ಧೀಕರಣಗೊಳಿಸಿ ನೀರಾವರಿ ಸೌಲಭ್ಯ ಕಲ್ಪಿಸಲಾಗುತ್ತಿದೆ. ಮಲೆನಾಡು ಪ್ರದೇಶಗಳಾದ ಕೊಡಗು, ದಕ್ಷಿಣ ಕನ್ನಡ, ಉಡುಪಿ, ಕಾರವಾರ, ಚಿಕ್ಕಮಗಳೂರು, ಶಿವಮೊಗ್ಗ ಮತ್ತು ಹಾಸನ ಜಿಲ್ಲೆಗಳಲ್ಲಿ 1.00 ಎಕರೆ ಜಮೀನು ಹೊಂದಿರುವವರಿಗೂ ಸಹ ನೀರಾವರಿ ಸೌಲಭ್ಯ ಒದಗಿಸಲಾಗುತ್ತಿದೆ.

ಈ ಯೋಜನೆಯಡಿ ಕೋಲಾರ, ಚಿಕ್ಕಬಳ್ಳಾಪುರ, ಬೆಂಗಳೂರು(ಗ್ರಾ), ಬೆಂಗಳೂರು(ನಗರ), ತುಮಕೂರು ಮತ್ತು ರಾಮನಗರ ಜಿಲ್ಲೆಗಳಲ್ಲಿ ಅಂತರ್ಜಲ ಮಟ್ಟ ಕೆಳಗೆ ಕುಸಿದಿರುವುದರಿಂದ ಈ ಜಿಲ್ಲೆಗಳಲ್ಲಿ ಘಟಕ ವೆಚ್ಚ ರೂ 4.50 ಲಕ್ಷಕ್ಕೆ ಹೆಚ್ಚಿಸಲಾಗಿದ್ದು, ಇದರಲ್ಲಿ ರೂ. 4.00 ಲಕ್ಷ ಸಹಾಯಧನವಿದ್ದು, ಉಳಿದ ರೂ. 50,000/- ಅವಧಿ ಸಾಲವಾಗಿರುತ್ತದೆ. ಇತರೆ ಜಿಲ್ಲೆಗಳಲ್ಲಿ ಘಟಕ ವೆಚ್ಚ ರೂ. 3.50 ಲಕ್ಷ ನಿಗದಿಪಡಿಸಿದ್ದು, ಇದರಲ್ಲಿ ರೂ.3.00ಲಕ್ಷ ಸಹಾಯದನ ಮತ್ತು ರೂ.0.50 ಲಕ್ಷ ಅವಧಿ ಸಾಲವಾಗಿರುತ್ತದೆ. ಘಟಕ ವೆಚ್ಚದ ಪೈಕಿ ವಿದ್ಯುದ್ಧೀಕರಣಕ್ಕೆ ಘಟಕ

ವೆಚ್ಚದ ಸಹಾಯಧನದ ಮಿತಿಯಲ್ಲಿ ಪ್ರತಿ ಕೊಳವೆಬಾವಿಗೆ ರೂ. 50,000/-ಗಳನ್ನು ಸಂಬಂಧಿಸಿದ ಎಸ್ಕಾಂಗಳಿಗೆ ಬಿಡುಗಡೆ ಮಾಡಲಾಗುವುದು.

## 4. ಪ್ರೇರಣಾ (ಮೈಕ್ರೊ ಕ್ರೆಡಿಟ್)ಯೋಜನೆ

ಡಾ: ಬಿ. ಆರ್. ಅಂಬೇಡ್ಕರ್ ಅಭಿವೃದ್ಧಿ ನಿಗಮದಿಂದ ಮಹಿಳೆಯರ ಆರ್ಥಿಕ ಸ್ವಾವಲಂಬನೆ ಮತ್ತು ಸಬಲೀಕರಣ ಉದ್ದೇಶಕ್ಕಾಗಿ **"ಪ್ರೇರಣಾ ಯೋಜನೆ"** ಗಳನ್ನು ಅನುಷ್ಠಾನಗೊಳಿಸಲು ಉದ್ದೇಶಿಸಿದೆ. ನಗರ ಮತ್ತು ಗ್ರಾಮೀಣ ಪ್ರದೇಶಗಳಲ್ಲಿನ ಪರಿಶಿಷ್ಟ ಜಾತಿ ನಿರುದ್ಯೋಗಿ ಮಹಿಳೆಯರಿಗೆ ಗುಂಪು ಚಟುವಟಿಕೆಗಳ ಮೂಲಕ ಉತ್ಪಾದನಾ ಚಟುವಟಿಕೆಗಳನ್ನು ಆರಂಭಿಸಿ ಲಾಭಗಳಿಸಲು ಸ್ವಯಂ ಉದ್ಯೋಗ ಘಟಕಗಳನ್ನು ಆರಂಭಿಸಲು ನಿಗಮದಿಂದ ಸಹಾಯದನ ಮತ್ತು ಸಾಲ ನೀಡಲು ಅವಕಾಶ ಮಾಡಿಕೊಡಲಾಗುತ್ತದೆ.

ಆಯ್ಕೆಯಾದ ಕನಿಷ್ಟ 10 ಮಹಿಳೆಯರ ಸ್ವಸಹಾಯ ಗುಂಪನ್ನು ರಚಿಸುವುದು/ಹಾಲಿ ಅಸ್ಥಿತ್ವದಲ್ಲಿರುವ ಮಹಿಳಾ ಸ್ವಸಹಾಯ ಗುಂಪಿಗೆ ಆರ್ಥಿಕ ಬೆಂಬಲವನ್ನು ನೀಡಲಾಗುವುದು. ಜಂಟಿ ಖಾತೆಯನ್ನು ಆರಂಭಿಸಿ ಉತ್ತಮ ಆದಾಯ ಗಳಿಸುವ, ಉತ್ಪಾದನಾ/ಸೇವಾಘಟಕ

ಆರಂಭಿಸಲು ರೂ.2.50ಲಕ್ಷ ಘಟಕವೆಚ್ಚವನ್ನು ಮಂಜೂರು ಮಾಡಲಾಗುವುದು. ಪ್ರತಿ ಸದಸ್ಯರಿಗೆ ರೂ.25,000/-ದಂತೆ ಹಣವನ್ನು ನಿಗಮ ಭರಿಸುತ್ತದೆ. (ರೂ.15,000/- ಸಹಾಯಧನ ಮತ್ತು ರೂ.10,000/- ಬೀಜಧನ ಸಾಲ). ವ್ಯಾಪಾರ/ ಉತ್ಪಾದನೆ/ಸೇವಾ ಚಟುವಟಿಕೆಗಳಲ್ಲಿ ಗಳಿಸುವ ಆದಾಯವನ್ನು ಸಮಾನವಾಗಿ ಹಂಚಿಕೆ ಮಾಡಿಕೊಂಡು ಆರ್ಥಿಕ ಸ್ವಾವಲಂಬನೆಯನ್ನು ಹೊಂದುವುದು ಯೋಜನೆಯ ಮೂಲ ಉದ್ದೇಶವಾಗಿರುತ್ತದೆ.

## 5. ಭೂ ಒಡೆತನ ಯೋಜನೆ

ರಾಜ್ಯದಲ್ಲಿ ಪರಿಶಿಷ್ಟ ಜಾತಿಗೆ ಸೇರಿದ ಭೂರಹಿತ ಕೃಷಿ ಕಾರ್ಮಿಕರ ಕುಟುಂಬದ ಮಹಿಳೆಯರಿಗೆ ಮಾತ್ರ ಈ ಯೋಜನೆಯಡಿ ಸೌಲಭ್ಯವನ್ನು ನೀಡಲಾಗುತ್ತದೆ. ಸರ್ಕಾರದ ಆದೇಶ ಸಂಖ್ಯೆ:ಸಕಇ 148ಎಸ್‌ಡಿಸಿ2017, ಬೆಂಗಳೂರು, ದಿನಾಂಕ:20.04.2017 ರಂತೆ ಘಟಕ ವೆಚ್ಚ ಗರಿಷ್ಟ ರೂ.15.00ಲಕ್ಷ ಇದ್ದು, ಇದರಲ್ಲಿ ಶೇ.50 ಭಾಗ ಸಹಾಯಧನ ಹಾಗೂ ಶೇ.50 ಭಾಗ ಸಾಲದ ರೂಪದಲ್ಲಿ ಆರ್ಥಿಕ ನೆರವನ್ನು ನೀಡಲಾಗುವುದು. ರೂ.15.00ಲಕ್ಷ

ಘಟಕ ವೆಚ್ಚದ ಮಿತಿಯಲ್ಲಿ ಕನಿಷ್ಠ 2 ಎಕರೆ ಖುಷ್ಕಿ ಅಥವಾ

ಕನಿಷ್ಠ 1 ಎಕರೆ ತರಿ/ಭಾಗಾಯ್ತು ಜಮೀನುಗಳನ್ನು ಅಥವಾ ಬಾಗಾಯ್ತು ಅರ್ಧ ಎಕರೆಗೆ(20 ಗುಂಟೆ) ಕಡಿಮೆಯಲ್ಲದಂತೆ ಒದಗಿಸಲಾಗುವುದು. ಫಲಾನುಭವಿಯು ಸಾಲದ ಹಣವನ್ನು 10 ವಾರ್ಷಿಕ ಕಂತುಗಳಲ್ಲಿ ಮರುಪಾವತಿ ಮಾಡಬೇಕು. ಇದಕ್ಕೆ ಬಡ್ಡಿದರ ಶೇ.6 ವಿಧಿಸಲಾಗುತ್ತದೆ. ಜಮೀನನ್ನು ಮಾರಾಟ ಮಾಡುವವರು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಜನಾಂಗಕ್ಕೆ ಸೇರಿದವರಾಗಿರಬಾರದು. ಜಿಲ್ಲಾ ಮಟ್ಟದಲ್ಲಿ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿರುವ ಸಮಿತಿಯು ದರ ನಿಗದಿಪಡಿಸುತ್ತದೆ.

ಭೂ ಒಡೆತನ ಯೋಜನೆಯಡಿ ಅವಧಿಸಾಲವನ್ನು ನಿಗಮದ ಷೇರು ಬಂಡವಾಳದಿಂದ ಮತ್ತು ಸಹಾಯಧನವನ್ನು ರಾಜ್ಯ ಸರ್ಕಾರವು ನಿಗಧಿಪಡಿಸಿದ ಅನುದಾನ ದಿಂದ ಭರಿಸಲಾಗುತ್ತಿದೆ. ಈ ಯೋಜನೆಯಡಿ ಫಲಾಪೇಕ್ಷಿಗಳಿಗೆ ಸೌಲಭ್ಯ ಕಲ್ಪಿಸಲು ವಿಧಾನಸಭಾ ಕ್ಷೇತ್ರವಾರು ಪರಿಶಿಷ್ಟ ಜಾತಿಯ ಜನಸಂಖ್ಯೆ ಆಧಾರದ ಮೇಲೆ ಮತ್ತು ಹಿಂದಿನ ವರ್ಷಗಳಲ್ಲಿ ಹೆಚ್ಚಿನ ಪ್ರಸ್ತಾವನೆಗಳು ಬಂದಿರುವ ಜಿಲ್ಲೆಗಳನ್ನು ಗಮನದಲ್ಲಿಟ್ಟುಕೊಂಡು ಜಿಲ್ಲಾವಾರು ಗುರಿಯನ್ನು ನಿಗದಿಪಡಿಸಲಾಗಿದೆ.

2018-19ನೇ ಸಾಲಿನಿಂದ ಬೆಂಗಳೂರು ನಗರ, ಗ್ರಾಮಾಂತರ, ರಾಮನಗರ ಮತ್ತು ಚಿಕ್ಕಬಳ್ಳಾಪುರ ಜಿಲ್ಲೆಗಳಿಗೆ ಸೀಮಿತಗೊಂಡಂತೆ ಈ ಯೋಜನೆಯಡಿ ಘಟಕ ವೆಚ್ಚವನ್ನು ರೂ.15.00ಲಕ್ಷಗಳಿಂದ ರೂ.20.00ಲಕ್ಷಗಳಿಗೆ ಹೆಚ್ಚಿಸಲಾಗಿದೆ.

ಉಳಿದ ಜಿಲ್ಲೆಗಳಲ್ಲಿ ಘಟಕ ವೆಚ್ಚ ರೂ.15.00ಲಕ್ಷಗಳಿದ್ದು, ಇದರಲ್ಲಿ ಸಹಾಯಧನ ಮತ್ತು ಅವಧಿಸಾಲ 50:50ರ ಅನುಪಾದಲ್ಲಿರುತ್ತದೆ. ಅವಧಿ ಸಾಲಕ್ಕೆ ವಾರ್ಷಿಕ ಶೇ.6ರ ದರದಲ್ಲಿ ಬಡ್ಡಿ ವಿಧಿಸಲಾಗುವುದು. ಸಾಲ ಮತ್ತು ಬಡ್ಡಿಯನ್ನು 10 ವರ್ಷಗಳ ಅವಧಿಯಲ್ಲಿ ವಾರ್ಷಿಕ ಕಂತುಗಳಲ್ಲಿ ಮರುಪಾವತಿ ಮಾಡಬೇಕಾಗಿರುತ್ತದೆ.